# ದಾವಣಗೆರೆ ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಶಿವಗಂಗೋತ್ರಿ, ದಾವಣಗೆರೆ-577002.
ದೂರವಾಣಿ ಸಂಖ್ಯೆ: 08192-208029

ಸಂಖ್ಯೆ: ದಾವಿವಿ/ಶೈ/08/2019-20/3754 ದಿನಾಂಕ:17.07.2019

## :ಸುತ್ತೋಲೆ:

ವಿಷಯ: **2019-20ನೇ ಶೈಕ್ಷಣಿಕ ಸಾಲಿನ ಸ್ನಾತಕ ಪದವಿಯ ಪ್ರವೇಶ ದಿನಾಂಕವನ್ನು ನಿಗದಿಪಡಿಸಿರುವ ಬಗ್ಗೆ.**

ಉಲ್ಲೇಖ:
1. ಈ ಕಛೇರಿ ಅಧಿಸೂಚನೆ ಸಂಖ್ಯೆ: ದಾವಿ/ಶೈ/656/2019-20/427, ದಿನಾಂಕ: 03.05.2019.
2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 17.07.2019

********

ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಎಲ್ಲಾ ಸ್ನಾತಕ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ 2019-20ನೇ ಶೈಕ್ಷಣಿಕ ಸಾಲಿನ ಸ್ನಾತಕ ಪದವಿಯ ಶೈಕ್ಷಣಿಕ ವೇಳಾಪಟ್ಟಿಯನ್ನು ಉಲ್ಲೇಖ (1)ರ ಅಧಿಸೂಚನೆಯಲ್ಲಿ ಪರಿಚಲಿಸಲಾಗಿತ್ತು. ಸದರಿ ವೇಳಾಪಟ್ಟಿಯಲ್ಲಿ ಸ್ನಾತಕ ಪ್ರಥಮ ಸೆಮಿಸ್ಟರ್ ಪದವಿಗೆ ರೂ:500/-ಗಳ ದಂಡಶುಲ್ಕದೊಂದಿಗೆ ಪ್ರವೇಶ ಪಡೆಯಲು ಕೊನೆಯ ದಿನಾಂಕ: 22.08.2019 ಎಂದು ನಿಗದಿಪಡಿಸಲಾಗಿತ್ತು.

ಆದರೆ, ಸರ್ಕಾರವು ಪಿ.ಯು.ಸಿ. ಪೂರಕ ಪರೀಕ್ಷೆಗಳ ಫಲಿತಾಂಶವನ್ನು ದಿನಾಂಕ:05.07.2019ರಂದು ಪ್ರಕಟಿಸಿರುವ ಹಿನ್ನೆಲೆಯಲ್ಲಿ ವಿಶ್ವವಿದ್ಯಾನಿಲಯದ ಪ್ರಥಮ ಪದವಿ ಕೋರ್ಸ್‌ಗಳ ಪ್ರವೇಶಾತಿ ದಿನಾಂಕವನ್ನು ಸಹ ಈ ಕೆಳಗಿನಂತೆ ಮರು ನಿಗದಿಪಡಿಸಲಾಗಿದೆ.

**ಈ ಹಿನ್ನೆಲೆಯಲ್ಲಿ ವಿಶ್ವವಿದ್ಯಾನಿಲಯದ ಎಲ್ಲಾ ಪದವಿ ಕೋರ್ಸ್‌ಗಳಿಗೆ (ಪ್ರಥಮ, ದ್ವಿತೀಯ, ತೃತೀಯ ಮತ್ತು ಪೂರಕ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ) ಪ್ರವೇಶಾತಿ ಕೊನೆಯ ದಿನಾಂಕವನ್ನು ದಂಡ ಶುಲ್ಕ ರೂ:500/-ಗಳೊಂದಿಗೆ ದಿನಾಂಕ:27.07.2019ಕ್ಕೆ ಮರುನಿಗದಿಪಡಿಸಲಾಗಿದೆ ಎಂದು ತಿಳಿಸಲು** ನಿರ್ದೇಶಿತನಾಗಿದ್ದೇನೆ.

ಆದೇಶಾನುಸಾರ,

ಕುಲಸಚಿವರು
ದಾವಣಗೆರೆ ವಿಶ್ವವಿದ್ಯಾನಿಲಯ
ಶಿವಗಂಗೋತ್ರಿ, ದಾವಣಗೆರೆ - 577002.

ಗೆ,

ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಎಲ್ಲಾ ಸ್ನಾತಕ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

ಪ್ರತಿ:-

1. ಕುಲಸಚಿವರು (ಪರೀಕ್ಷಾಂಗ), ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
2. ಮಾನ್ಯ ಕುಲಪತಿಗಳ/ಕುಲಸಚಿವರ ಆಪ್ತಕಾರ್ಯಾಲಯ, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
3. ಕಛೇರಿ ಪ್ರತಿ.